ಕರ್ನಾಟಕ ಸರ್ಕಾರ

ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್-05/2024 ದಿನಾಂಕ: 22-05-2024

**ಎಂಬಿಎ / ಎಂಸಿಎ /ಎಂಇ/ಎಂ.ಟೆಕ್/ಎಂ.ಆರ್ಕಿಟೆಕ್ಚರ್ ಕೋರ್ಸುಗಳ ಮೊದಲನೆ ವರ್ಷದ / 1ನೇ ಸೆಮಿಸ್ಟರ್‌ಗಳ ಪ್ರವೇಶಕ್ಕೆ**

**ಸ್ನಾತಕೋತ್ತರ ಸಾಮಾನ್ಯ ಪ್ರವೇಶ ಪರೀಕ್ಷೆ- PGCET-2024**

1. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಇಡಿ 17 ಟಿಇಸಿ 2018 ಬೆಂಗಳೂರು, ದಿನಾಂಕ 13-03-2018 ರ ಅನ್ವಯ ಅರ್ಹ ಕರ್ನಾಟಕ ಮತ್ತು ಕರ್ನಾಟೇಕತರ ಅಭ್ಯರ್ಥಿಗಳಿಂದ 2024-25ನೇ ಸಾಲಿನ ಮೊದಲನೆ ವರ್ಷದ / 1ನೇ ಸೆಮಿಸ್ಟರ್‌ಗಳ (ಪೂರ್ಣಾವಧಿ / ಅರೆಕಾಲಿಕ) ಎಂಬಿಎ / ಎಂಸಿಎ / ಎಂಇ / ಎಂ.ಟೆಕ್ / ಎಂ.ಆರ್ಕಿಟೆಕ್ಚರ್ ಕೋರ್ಸುಗಳ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ಮೇಲಿನ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು "Karnataka Selection of Candidates for Admission to Master of Business Administration and Master of Computer Application Courses Rules, 2005, 2011" & its amendments; "Karnataka Selection of Candidates for Admission to Master of Engineering (ME) and Master of Technology (M.Tech) courses, Rules, 2005, 2011 & its amendments" ರ ಅನ್ವಯ, ಅಭ್ಯರ್ಥಿಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸುವ ಸ್ನಾತಕೋತ್ತರ ಸಾಮಾನ್ಯ ಪವೇಶ ಪರೀಕ್ಷೆ - 2024 ಕ್ಕೆ ಹಾಜರಾಗಬೇಕು.

2. ಇಂಜಿನಿಯರಿಂಗ್ ಹಾಗು ಟೆಕ್ನಾಲಜಿ ವಿಭಾಗದಲ್ಲಿ GATE ಪರೀಕ್ಷೆಯಲ್ಲಿ ಅರ್ಹತೆ ಪಡೆದಿರುವ ಅಭ್ಯರ್ಥಿಗಳು ಮಾತ್ರ ವಿಟಿಯು, ಬೆಳಗಾವಿ ಅಡಿಯಲ್ಲಿನ ವಿವಿಧ ಎಂ.ಟೆಕ್ ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹರಾಗುತ್ತಾರೆ. ಗೇಟ್ ಪರೀಕ್ಷೆಯಲ್ಲಿ ಮಾನ್ಯತೆ ಅಂಕಗಳನ್ನು ಹೊಂದಿರುವವರು (Valid GATE Score) ಎಂಇ / ಎಂ.ಟೆಕ್ / ಎಂ. ಆರ್ಕ್ ಕೋರ್ಸ್‌ಗಳ ಪ್ರವೇಶಕ್ಕಾಗಿ, ಪಿಜಿಸಿಇಟಿ-2024ಕ್ಕೆ ಹಾಜರಾಗಬೇಕಾಗಿರುವುದಿಲ್ಲ, ಆದರೆ ಅಂತಹ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಗಳನ್ನು ಭರ್ತಿ ಮಾಡಿ ಶುಲ್ಕವನ್ನು ಪಾವತಿಸಿ ಪ್ರವೇಶಕ್ಕೆ ಅರ್ಹರಾಗಬಹುದು. SC/ST/OBC ಅರ್ಹತಾ ಮಾನದಂಡಗಳು ಕರ್ನಾಟಕ SC/ST/OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.

3. ಕರ್ನಾಟಕೇತರ ಅಭ್ಯರ್ಥಿಗಳು ಎಂಬಿಎ ಮತ್ತು ಎಂಸಿಎ ಪ್ರವೇಶಕ್ಕೆ ಆಡಳಿತ ಮಂಡಳಿಯವರು ಸರ್ಕಾರಕ್ಕೆ ಬಿಟ್ಟುಕೊಡುವ ಸೀಟುಗಳನ್ನು ಮಾತ್ರ ಆಯ್ಕೆ ಮಾಡಲು ಅರ್ಹತೆ ಪಡೆಯುತ್ತಾರೆ. ಕರ್ನಾಟಕೇತರ ಅಭ್ಯರ್ಥಿಗಳಿಗೆ ಯಾವುದೇ ಮೀಸಲಾತಿಯ ಸವಲತ್ತುಗಳು ಅನ್ವಯಿಸುವುದಿಲ್ಲ. ಆದ್ದರಿಂದ ಸಾಮಾನ್ಯ ವರ್ಗಕ್ಕೆ ನಿಗದಿಪಡಿಸಿರುವ ಕನಿಷ್ಠ ಅಂಕಗಳನ್ನು ಪಡೆದಿದ್ದಲ್ಲಿ ಮಾತ್ರ (50%) ಅರ್ಹತೆಯನ್ನು ಪಡೆಯಬಹುದಾಗಿದೆ ಹಾಗು ಪ್ರವೇಶಕ್ಕಾಗಿ ನೊಂದಣಿಯನ್ನು ಮಾಡಿ ಕೊಳ್ಳಬಹುದಾಗಿದೆ. SC/ST/OBC ಅರ್ಹತಾ ಮಾನದಂಡಗಳು ಕರ್ನಾಟಕದ SC/ST/OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.

4. ಎಂಬಿಎ / ಎಂಸಿಎ /ಎಂಇ /ಎಂ.ಟೆಕ್ /ಎಂ.ಆರ್ಕಿಟೆಕ್ಚರ್ ಕೋರ್ಸುಗಳ ಪ್ರವೇಶಕ್ಕೆ, ಅಭ್ಯರ್ಥಿಗಳು ಅರ್ಹತಾ ಪರೀಕ್ಷೆಯಲ್ಲಿ ಒಟ್ಟು ಕನಿಷ್ಠ ಶೇ.50%, ಹಾಗು ಕರ್ನಾಟಕದ ಎಸ್.ಸಿ., ಎಸ್.ಟಿ., ಪ್ರವರ್ಗ-I ರ ಅಭ್ಯರ್ಥಿಗಳು ಕನಿಷ್ಠ ಶೇ.45% ಅಂಕಗಳನ್ನು ಪಡೆದಿರಬೇಕು. CGPA / SGPA ಗ್ರೇಡ್‌ಗಳ ಮಾದರಿಯಲ್ಲಿ ನಿಗದಿಪಡಿಸಿರುವ ಅರ್ಹತಾ ಪರೀಕ್ಷೆಯ ಅಂಕಗಳು, ಅಗತ್ಯವಿರುವ ಕನಿಷ್ಠ ಅರ್ಹತಾ ಅಂಕಗಳನ್ನು ಅಥವಾ ಅದಕ್ಕಿಂತ ಹೆಚ್ಚು ಅಂಕಗಳನ್ನು ಗ್ರೇಡ್‌ಗಳ ಅಂಕಗಳು ಸೂಚಿಸುತ್ತಿರುವ ಬಗ್ಗೆ ಖಾತರಿ ಪಡಿಸಿಕೊಳ್ಳಿ, SC/ST/OBC ಅರ್ಹತಾ ಮಾನದಂಡಗಳು ಕರ್ನಾಟಕದ SC/ST/OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.

5. **ಸ್ನಾತಕೋತ್ತರ ಸಾಮಾನ್ಯ ಪ್ರವೇಶ ಪರೀಕ್ಷೆ- PGCET-2024-** ಪರೀಕ್ಷಾ ವೇಳಾಪಟ್ಟಿ ಮತ್ತು ವಿಧಾನ

| ದಿನಾಂಕ / ದಿನ: | ಸಮಯ: | ಮೊದಲನೇ ವರ್ಷದ / ಮೊದಲನೇ ಸೆಮಿಸ್ಟರ್ ಪ್ರವೇಶ | ಒಟ್ಟು ಪ್ರಶ್ನೆಗಳು: | ಒಟ್ಟು ಅಂಕಗಳು: |
|---|---|---|---|---|
| 13-07-2024 ಶನಿವಾರ | ಮಧ್ಯಾಹ್ನ 02.30 ರಿಂದ 04.30 ರ ವರೆಗೆ | **ಎಂಇ/ಎಂ.ಟೆಕ್/ಎಂ.ಆರ್ಕಿಟೆಕ್ಚರ್** | 100 | 100 |
| 14-07-2024 ಭಾನುವಾರ | ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ರ ವರೆಗೆ | ಎಂಸಿಎ | 100 | 100 |
| | ಮಧ್ಯಾಹ್ನ 02.30 ರಿಂದ 04.30 ರ ವರೆಗೆ | ಎಂಬಿಎ | 100 | 100 |

(Non-programmable calculators are allowed for M.E. / M.Tech / M.Arch examination only)

6. ಪಠ್ಯಕ್ರಮ: **PGCET-2024** ರ ನೂತನ ಪಠ್ಯಕ್ರಮವನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ. **URL:** https://cetonline.karnataka.gov.in/kea/pgcet24

7. **ಆಸಕ್ತ ಅಭ್ಯರ್ಥಿಗಳು ಪಿಜಿಸಿಇಟಿ-2024ಕ್ಕೆ** ದಿನಾಂಕ 27-05-2024 ರ ಬೆಳಿಗ್ಗೆ 11.00 ರಿಂದ ದಿನಾಂಕ 17-06-2024 ರ ರಾತ್ರಿ 11.59 ರೊಳಗಾಗಿ ಆನ್‌ಲೈನ್ ಮೂಲಕ ನೊಂದಣಿ ಮಾಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ದಿನಾಂಕ 18-06-2024 ರ ಸಂಜೆ 6.00 ರೊಳಗೆ ಶುಲ್ಕವನ್ನು ಪಾವತಿಸಬಹುದಾಗಿರುತ್ತದೆ. ಪಾವತಿಸಿರುವ ಶುಲ್ಕ ರಸೀದಿಯು ಧೃಡಪಟ್ಟ ನಂತರವೇ ಅಭ್ಯರ್ಥಿಗಳಿಗೆ **ಪಿಜಿಸಿಇಟಿ-2024 ಪರೀಕ್ಷೆಗೆ** ಅಡ್ಮಿಶನ್ ಟಿಕೆಟ್ ಅನ್ನು ಡೌನ್‌ಲೋಡ್ ಮಾಡಿಕೊಳ್ಳಲು ಅನುಮತಿಸಲಾಗುವುದು.

8. ಶೈಕ್ಷಣಿಕ ವಿದ್ಯಾರ್ಹತೆ, ನೂತನ ಪಠ್ಯಕ್ರಮ, ದಾಖಲಾತಿ ಪರಿಶೀಲನೆಗೆ ಸಲ್ಲಿಸಬೇಕಾದ ಮೂಲ ದಾಖಲಾತಿಗಳು ಹಾಗು ವಿವರವಾದ ಅರ್ಹತಾ ಮಾನದಂಡಗಳನ್ನೊಳಗೊಂಡ ಮಾಹಿತಿ ಪುಸ್ತಕ 2024 ಅನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿರುತ್ತದೆ. ನೊಂದಣಿ ಮಾಡಿಕೊಳ್ಳುವ ಮೊದಲು ಶೈಕ್ಷಣಿಕ ಅರ್ಹತೆ, ವಿವಿಧ ವರ್ಗಗಳ ಸೀಟುಗಳಿಗೆ ನಿಗದಿಪಡಿಸಿರುವ ಅರ್ಹತಾ ಮಾನದಂಡಗಳು ಮತ್ತು ಅಂತಹ ಸೀಟುಗಳಿಗೆ ನಿಗದಿಪಡಿಸಿರುವ ಅಭ್ಯರ್ಥಿಯ ಅರ್ಹತೆ ಹಾಗು ಇತ್ಯಾದಿ ಮಾನದಂಡಗಳನ್ನು ಓದಿಕೊಂಡು ನೊಂದಣಿ ಮಾಡಿಕೊಳ್ಳಲು ಸೂಚಿಸಿದೆ.

9. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಪಿಜಿಸಿಇಟಿ-2024ಕ್ಕೆ ದಾಖಲಿಸಿದ ಎಲ್ಲಾ ಮಾಹಿತಿಗಳನ್ನು ಅಂತಿಮ ಎಂದು ಪರಿಗಣಿಸಲಾಗುತ್ತದೆ ಮತ್ತು ಈ ಮಾಹಿತಿಯೇ ಮುಂದಿನ ಎಲ್ಲಾ ಪ್ರಕ್ರಿಯೆಗಳಿಗೆ ಆಧಾರವಾಗಿರುತ್ತದೆ, ಹಾಗೂ ಯಾವುದೇ ಕಾರಣಕ್ಕೂ ದಾಖಲಿಸಿದ ಮಾಹಿತಿಯನ್ನು ಬದಲಾಯಿಸಲು ಅವಕಾಶವಿರುವುದಿಲ್ಲ.

10. ಕರ್ನಾಟಕದ ಅಭ್ಯರ್ಥಿಗಳಿಗೆ ಅನ್ವಯಿಸುವಂತೆ, ಅಭ್ಯರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು ಮತ್ತು ಜನ್ಮ ದಿನಾಂಕವನ್ನು SATS ಸಂಖ್ಯೆಯನ್ನು ಆಧರಿಸಿ ಕರ್ನಾಟಕ SSLC ಮಂಡಳಿ ಮೂಲಕ ಪಡೆಯಲಾಗುತ್ತದೆ. ಜಾತಿ / ಜಾತಿ ಆದಾಯ ಪ್ರಮಾಣ ಪತ್ರದ ಆರ್‌ಡಿ ಸಂಖ್ಯೆಯನ್ನು ಮತ್ತು 371(ಜೆ) ಆರ್‌ಡಿ ಸಂಖ್ಯೆಯನ್ನು ಆಧರಿಸಿ ಅಭ್ಯರ್ಥಿಯ ಜಾತಿ, ಆದಾಯ ಮತ್ತು 371(ಜೆ) ಗೆ ಸಂಬಂಧಿಸಿದ ಮಾಹಿತಿಯನ್ನು ಕಂದಾಯ ಇಲಾಖೆಯ ವೆಬ್‌ಸೇವೆಯ ಮೂಲಕ ಪಡೆಯಲಾಗುವುದು. ಆನ್‌ಲೈನ್ ಅರ್ಜಿಯಲ್ಲಿ ಸರಿಯಾಗಿ SATS ಸಂಖ್ಯೆಯನ್ನು ಮತ್ತು ಆರ್‌ಡಿ ಸಂಖ್ಯೆಯನ್ನು ನಮೂದಿಸಲು ಸೂಚಿಸಿದೆ.

ಗಮನಿಸಿ:

1. ವಿಟಿಯು, ಬೆಳಗಾವಿ ಇವರ ದಿನಾಂಕ 12-08-2014 ರ ಅನ್ವಯ, *Aeronautical Society of India* ಸಂಸ್ಥೆಯಿಂದ ಯುಜಿ ಪದವಿ ಪಡೆದಿರುವವರು ಎಂ.ಟೆಕ್ ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹತೆ ಇರುವುದಿಲ್ಲ.
2. ವಿಟಿಯು, ಬೆಳಗಾವಿ ಇವರ ದಿನಾಂಕ 30-05-2014 ರ ಅನ್ವಯ, ದೂರ ಶಿಕ್ಷಣದ (*Distance Education*) ಮೂಲಕ ಬಿಇ ಪದವಿ ಪಡೆದಿರುವವರು ಎಂ.ಟೆಕ್ ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹತೆ ಇರುವುದಿಲ್ಲ.
3. ವಿಟಿಯು, ಬೆಳಗಾವಿ ಇವರ ದಿನಾಂಕ 14-05-2018 ರ ಅನ್ವಯ, *Aeronautical Society of India and Associate Membership Examination of Institution of Electronics and Telecommunication (AMIET)* ಸಂಸ್ಥೆಯಿಂದ ಯುಜಿ ಪದವಿ ಪಡೆದಿರುವವರು ಎಂ.ಟೆಕ್. ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹತೆ ಇರುವುದಿಲ್ಲ.
4. PGCET-2024 ರಲ್ಲಿ ಅರ್ಹತೆಯನ್ನು ಪಡೆದ ಮಾತ್ರಕ್ಕೆ, ಅರ್ಹತಾ ಮಾನದಂಡಗಳನ್ನು ಪೂರೈಸದಿದ್ದಲ್ಲಿ / ನಿಗದಿತ ಪ್ರಮಾಣ ಪತ್ರಗಳನ್ನು ದಾಖಲಾತಿ ಪರಿಶೀಲನೆಗೆ ಹಾಜರು ಪಡಿಸದಿದ್ದಲ್ಲಿ ಅಭ್ಯರ್ಥಿಯು ಪ್ರವೇಶಾತಿಗಾಗಿ ಯಾವುದೇ ಹಕ್ಕನ್ನು ಹೊಂದುವುದಿಲ್ಲ. ಮುಂದುವರಿದು, PGCET-2024 ಪರೀಕ್ಷೆಯ ನಂತರ ದಾಖಲಾತಿ ಪರೀಶೀಲನೆಯನ್ನು ಪೂರ್ಣಗೊಳಿಸಿ, ವೆರಿಫಿಕೇಶನ್ ಸ್ಲಿಪ್ ಅನ್ನು ಪಡೆದು, ಇಚ್ಛೆ / ಆಯ್ಕೆಗಳನ್ನು ದಾಖಲಿಸುವ ಅಭ್ಯರ್ಥಿಗಳು ಮಾತ್ರ ಎಂಬಿಎ / ಎಂಸಿಎ /ಎಂಇ /ಎಂ.ಟೆಕ್ /ಎಂ.ಆರ್ಕಿಟೆಕ್ಚರ್ ಕೋರ್ಸುಗಳಿಗೆ ಪ್ರಾಧಿಕಾರದ ಮೂಲಕ ಪ್ರವೇಶ ಪಡೆಯಲು ಅರ್ಹರಾಗುತ್ತಾರೆ.
5. ಅಭ್ಯರ್ಥಿಗಳು ಹೊಂದಿರುವ ಯುಜಿ ಪದವಿಗಳ ಆಧಾರದ ಮೇಲೆ ಆಯ್ಕೆ ಮಾಡಿಕೊಳ್ಳುವ ಸ್ನಾತಕೋತ್ತರ ಪದವಿಗಳು ಮತ್ತು ಪ್ರಾಧಿಕಾರವು ನೀಡುವ ಎಲ್ಲಾ ಪ್ರವೇಶಗಳು; ಸರ್ಕಾರ, ಸಂಬಂಧಿಸಿದ ವಿಶ್ವವಿದ್ಯಾನಿಲಯಗಳ ಹಾಗೂ ಅಪೆಕ್ಸ್ ಸಂಸ್ಥೆಗಳು ನೀಡುವ ಅನುಮೋದನೆಗೆ ಒಳಪಟ್ಟಿರುತ್ತದೆ.

ಪ್ರವೇಶಾತಿ ನಿಯಮಾವಳಿಗಳು, ಅರ್ಹತಾ ಕಂಡಿಕೆಗಳು, ವಿವಿಧ ವೇಳಾಪಟ್ಟಿ, ಇತ್ಯಾದಿಗಳ ಬಗ್ಗೆ ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಕೆಇಎ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡುವುದು.

(ಹೆಚ್. ಪ್ರಸನ್ನ, ಭಾ.ಆ.ಸೇ.)
ಕಾರ್ಯನಿರ್ವಾಹಕ ನಿರ್ದೇಶಕರು